# All India Radio: Bangalore
# Regional Bulletin In Kannada
# 12.07.2026 / 6.40 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಸಕಲ ಸರ್ಕಾರಿ ಗೌರವದೊಂದಿಗೆ ಮೇರು ಗಾಯಕಿ ಎಸ್. ಜಾನಕಿ ಅಂತ್ಯಕ್ರಿಯೆ
2. ರಾಜ್ಯದಲ್ಲಿ ಉದ್ಯೋಗ ಕ್ರಾಂತಿ : ೪ ಸಾವಿರದ ೭೨೩ ಹುದ್ದೆ ಭರ್ತಿ - ಉಪಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್
3. ಹಿರಿಯ ನಾಗರಿಕರ ಬದುಕು ಸ್ವಾಭಿಮಾನದಿಂದ ನೋಡಿಕೊಳ್ಳುವುದು ಸರ್ಕಾರದ ಆದ್ಯತೆ- ಸಂಸದ ಗೋವಿಂದ ಕಾರಜೋಳ
4. ಹಲವು ಜಿಲ್ಲೆಗಳಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಯಶಸ್ವಿ

<><><><>

ಮೇರು ಗಾಯಕಿ ಎಸ್. ಜಾನಕಿ ಅವರ ಅಂತ್ಯಕ್ರಿಯೆ ಇಂದು ಸಂಜೆ ಮೈಸೂರಿನ ಬೋಗಾದಿ ಬಳಿಯ ಕಣಿಯನಹುಂಡಿ ತೋಟದ ಮನೆಯಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ನೇರವೇರಿಸಲಾಯಿತು. ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಸಾರ್ವಜನಿಕ ದರ್ಶನಕ್ಕಾಗಿ ಗಾನಕೋಗಿಲೆ ಎಸ್. ಜಾನಕಿ ಅವರ ಪಾರ್ಥಿವ ಶರೀರವನ್ನು ಬೆಳಗ್ಗೆ ೯ ಗಂಟೆಯಿಂದ ಸಂಜೆ ೫ರ ವರೆಗೆ ಇರಿಸಲಾಗಿತ್ತು, ತದನಂತರ ಅವರ ಪಾರ್ಥೀವ ಶರೀರವನ್ನು ಬೋಗಾದಿಯ ಕಣಿಯನಹುಂಡಿ ಬಳಿ ಇರುವ ಅವರ ತೋಟದ ಮನೆಗೆ ಅಂತ್ಯಕ್ರಿಯೆಗಾಗಿ ಮೆರವಣಿಗೆಯ ಮೂಲಕ ಕೊಂಡೊಯ್ಯಲಾಯಿತು. ಸಾವಿರಾರು ಅಭಿಮಾನಿಗಳು ಸರತಿ ಸಾಲಿನಲ್ಲಿ ನಿಂತು ತಮ್ಮ ನೆಚ್ಚಿನ ಗಾಯಕಿಯ ಅಂತಿಮ ದರ್ಶನ ಪಡೆದರು. ಕನ್ನಡ, ಮಲಯಾಳಂ, ತಮಿಳು ಚಿತ್ರರಂಗದ ಪ್ರಮುಖ ಗಣ್ಯರು, ಕಲಾವಿದರು ಹಾಗೂ ರಾಜಕೀಯ ಮುಖಂಡರು ಅಂತಿಮ ದರ್ಶನ ಪಡೆದು ತೀವ್ರ ಸಂತಾಪ ಸೂಚಿಸಿದರು. ಪಾರ್ಥಿವ ಶರೀರ ಕಣಿಯನಹುಂಡಿ ತೋಟದ ಮನೆಗೆ ತಲುಪಿದ ನಂತರ ಸಂಜೆ ೫.೪೦ಕ್ಕೆ ಧಾರ್ಮಿಕ ವಿಧಿವಿಧಾನ ಹಾಗೂ ಸಕಲ ಸರ್ಕಾರಿ ಗೌರವಗಳೊಂದಿಗೆ ಸಾರ್ವಜನಿಕರ ಸಮ್ಮುಖದಲ್ಲಿ ಅಂತ್ಯಕ್ರಿಯೆ ನಡೆಯಿತು.

<><><><>

ರಾಜ್ಯದಲ್ಲಿ ಉದ್ಯೋಗ ಕ್ರಾಂತಿ ಶುರುವಾಗಿದೆ. ವಸತಿ ಶಾಲೆ ಶಿಕ್ಷಕರು, ಪೊಲೀಸ್ ಕಾನ್ಸ್ಟೇಬಲ್, ಕಂದಾಯ ಇಲಾಖೆಯಲ್ಲಿನ ಭೂಮಾಪಕರು ಹಾಗೂ ಗ್ರಾಮ ಆಡಳಿತಾಧಿಕಾರಿಗಳು ಸೇರಿದಂತೆ ಸುಮಾರು ೪ ಸಾವಿರದ ೭೨೩ ಹುದ್ದೆಗಳ ಭರ್ತಿಗೆ ಅಧಿಸೂಚನೆ ಹೊರಡಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್ ಸಾಮಾಜಿಕ ಮಾದ್ಯಮದ ಮೂಲಕ ಹೇಳಿದ್ದಾರೆ. ಪ್ರಕೃತಿ ವಿಕೋಪದ ಸಂಧರ್ಭದಲ್ಲಿ ಬೆಳೆ ಹಾನಿಯನ್ನು ನಿಖರವಾಗಿ ಅಂದಾಜಿಸಿ, ಸೂಕ್ತ ಪರಿಹಾರ ನೀಡಲು ಸಹಕಾರಿಯಾಗುವಂತೆ ಉಪಗ್ರಹ ಆಧಾರಿತ ಬೆಳೆ ಸಮೀಕ್ಷೆ ನಡೆಸಲು ನಿರ್ಧರಿಸಲಾಗಿದೆ. ಇದನ್ನು ಚಿಕ್ಕಮಗಳೂರಿನಲ್ಲಿ ಪ್ರಾಯೋಗಿಕವಾಗಿ ಜಾರಿ ಮಾಡಲಾಗುತ್ತದೆ. ಅಲ್ಲದೇ, ಎಸ್.ಐ.ಆರ್ ಪ್ರಕ್ರಿಯೆ ವೇಳೆ ಜನರಿಗೆ ಅನುಕೂಲವಾಗಲು ಖಾಯಂ ನಿವಾಸ ಪತ್ರವನ್ನು ನೀಡಲು ತೀರ್ಮಾನಿಸಲಾಗಿದೆ ಎಂದರು.

<><><><>

ರಾಯಚೂರು ನಗರ ವಿಧಾನ ಸಭಾ ಕ್ಷೇತ್ರದ ಮಾಜಿ ಶಾಸಕ ಸೈಯದ ಯಾಸೀನ ಅವರು ಅನಾರೋಗ್ಯದ ಕಾರಣ ಇಂದು ಬೆಳಿಗ್ಗೆ ಬೆಂಗಳೂರಿನ ಆಸ್ಪತ್ರೆಯಲ್ಲಿ ನಿಧನ ಹೊಂದಿದ್ದಾರೆ. ಅವರಿಗೆ ೭೪ ವರ್ಷ ವಯಸ್ಸಾಗಿತ್ತು. ಸೈಯದ ಯಾಸೀನ ಅವರು ಕೇಂದ್ರದ ಮಾಜಿ ಸಚಿವ ಸಿ.ಕೆ. ಜಾಫರ್ ಷರೀಫ ಅವರ ಅಳಿಯರಾಗಿದ್ದು, ರಾಯಚೂರು ನಗರ ವಿಧಾನಸಭಾ ಕ್ಷೇತ್ರದಿಂದ ಆರು ಬಾರಿ ಸ್ಪರ್ಧಿಸಿದ್ದರು, ಎರಡು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದರು, ಅವರ ಅಂತ್ಯಕ್ರಿಯೆ ಇಂದು ಸಾಯಂಕಾಲ ರಾಯಚೂರು ನಗರದ ಕಮಲಿವಾಲೆ ಬಾಬಾ ಕಬರಸ್ಥಾನದಲ್ಲಿ ನೆರವೇರಬಹುದು ಎಂದು ಕುಟುಂಬದ ಸದಸ್ಯರು ತಿಳಿಸಿದ್ದಾರೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಅವರ ಪಾರ್ಥಿವ ಶರೀರಕ್ಕೆ ಅಂತಿಮ ನಮನ ಸಲ್ಲಿಸಿದರು.

<><><><>

ಕೊಡಗು ಜಿಲ್ಲೆಗೆ ನವ ಮಂಗಳೂರು ಬಂದರು ಸಂಸ್ಥೆಯಿಂದ ಶಾಶ್ವತ ಜನೋಪಯೋಗಿ ಯೋಜನೆಯನ್ನು ಜಾರಿಗೊಳಿಸಲು ಬದ್ಧ ಎಂದು ಸಂಸ್ಥೆಯ ಅಧ್ಯಕ್ಷ ಸುಶೀಲ್ ಕುಮಾರ್ ಸಿಂಗ್ ಭರವಸೆ ನೀಡಿದ್ದಾರೆ.

ಮಡಿಕೇರಿಯಲ್ಲಿ ಕೊಡಗು ಜಿಲ್ಲಾ ಚೇಂಬರ್ ಆಫ್ ಕಾಮರ್ಸ್ ನಿಯೋಗದೊಂದಿಗೆ ಸಭೆ ನಡೆಸಿ ಮಾಹಿತಿ ಪಡೆದು ಮಾತನಾಡಿದರು. ಈ ಸಂದರ್ಭದಲ್ಲಿ ಕೊಡಗು ಜಿಲ್ಲಾ ಚೇಂಬರ್ ಆಫ್ ಕಾಮರ್ಸ್‌ನ ಗೌರವ ಸಲಹೆಗಾರ ಜಿ.ಚಿದ್ವಿಲಾಸ್ ಪ್ರಸ್ತಾವನೆ ಸಲ್ಲಿಸಿ, ಕೊಡಗು ಜಿಲ್ಲೆಯಿಂದ ಬಹುತೇಕ ಕಾಫಿ ವಹಿವಾಟು ನವ ಮಂಗಳೂರು ಬಂದರಿನ ಮೂಲಕ ಆಗುತ್ತಿದೆ. ನವಮಂಗಳೂರಿನ ಆರ್ಥಿಕ ಲಾಭಕ್ಕೂ ಕೊಡಗಿನಿಂದ ಸರಬರಾಜಾಗುತ್ತಿರುವ ಕಾಫಿ ಪರೋಕ್ಷವಾಗಿ ಕಾರಣವಾಗುತ್ತಿದೆ ಎಂದರು. ಈ ನಿಟ್ಟಿನಲ್ಲಿ ನವಮಂಗಳೂರು ಬಂದರು ಟ್ರಸ್ಟ್ ನಿಂದ ಕಾರ್ಪೊರೇಟ್ ಸಾಮಾಜಿಕ ಜವಾಬ್ದಾರಿ ನಿಧಿ ಬಳಸಿ ಕೊಡಗು ಜಿಲ್ಲೆಯಲ್ಲಿ ಜನರಿಗೆ ಪ್ರಯೋಜನವಾಗುವಂಥ ಶಾಶ್ವತ ಯೋಜನೆಯನ್ನು ಜಾರಿಗೊಳಿಸುವಂತೆ ಕೋರಿದರು. ಈ ಪ್ರಸ್ತಾವನೆಗೆ ಸುಶೀಲ್ ಕುಮಾರ್ ಪೂರಕವಾಗಿ ಸ್ಪಂದಿಸಿದರು.

<><><><>

ದೇಶದ ಹಿರಿಯ ನಾಗರಿಕರ ಬದುಕು ಸ್ವಾಭಿಮಾನದಿಂದ ಕೂಡಿರುವಂತೆ ನೋಡಿಕೊಳ್ಳುವುದು ಸರ್ಕಾರದ ಪ್ರಮುಖ ಆದ್ಯತೆಯಾಗಿದೆ ಎಂದು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸಂಸದ ಗೋವಿಂದ ಎಂ. ಕಾರಜೋಳ ತಿಳಿಸಿದ್ದಾರೆ. ನಗರದ ಎಸ್.ಎಸ್.ಕೆ.ಎಸ್ ಸಮುದಾಯ ಭವನದಲ್ಲಿ ಹಮ್ಮಿಕೊಂಡಿದ್ದ 'ರಾಷ್ಟ್ರೀಯ ವಯೋಶ್ರೀ ಯೋಜನೆ'ಯಡಿ ಹಿರಿಯ ನಾಗರಿಕರಿಗೆ ಉಚಿತ ಸಾಧನ ಸಲಕರಣೆಗಳ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಪ್ರಧಾನಿ ನರೇಂದ್ರ ಮೋದಿ ಅವರ ವೈಯಕ್ತಿಕ ಕಾಳಜಿಯ ಫಲವಾಗಿ ಹಿರಿಯ ನಾಗರಿಕರ ಕಲ್ಯಾಣಕ್ಕಾಗಿ ಹೆಚ್ಚಿನ ಅನುದಾನ ಬಿಡುಗಡೆಯಾಗಿದ್ದು, ದೇಶಾದ್ಯಂತ ಈ ಯೋಜನೆಯನ್ನು ಜಾರಿಗೆ ತರಲಾಗಿದೆ ಎಂದರು. ಬಡತನದ ಕಾರಣದಿಂದಾಗಿ ಕನ್ನಡಕ, ಶ್ರವಣ ಸಾಧನ ಹಾಗೂ ವಾಕಿಂಗ್ ಸ್ಟಿಕ್‌ಗಳಂತಹ ಮೂಲಭೂತ ಉಪಕರಣಗಳನ್ನು ಖರೀದಿಸಲು ಆರ್ಥಿಕ ಶಕ್ತಿ ಇಲ್ಲದ ಹಿರಿಯರಿಗೆ ಈ ಅತ್ಯಾಧುನಿಕ ಸಾಧನಗಳು ಸ್ವಾವಲಂಬನೆಯ ಸಂಕೇತವಾಗಿವೆ ಎಂದು ತಿಳಿಸಿದರು. ಚಿತ್ರದುರ್ಗ ಜಿಲ್ಲೆಯ ಚಿತ್ರದುರ್ಗ, ಹಿರಿಯೂರು, ಚಳ್ಳಕೆರೆ ಮತ್ತು ಹೊಳಲ್ಕೆರೆ ತಾಲ್ಲೂಕುಗಳ ಒಟ್ಟು ೯೮೬ ಫಲಾನುಭವಿಗಳಿಗೆ ೮೪ ಲಕ್ಷದ ೮೪ ಸಾವಿರ ರೂಪಾಯಿ ವೆಚ್ಚದಲ್ಲಿ ೪ ಸಾವಿರದ ೪೬೧ ಸಾಧನ ಸಲಕರಣೆಗಳನ್ನು ಹಂಚಲಾಗುತ್ತಿದ್ದು, ಉಳಿದ ತಾಲ್ಲೂಕುಗಳಲ್ಲೂ ಶೀಘ್ರದಲ್ಲೇ ವಿತರಿಸಲಾಗುವುದು ಎಂದು ಭರವಸೆ ನೀಡಿದರು.

<><><><>

ಚಿತ್ರದುರ್ಗ ಜಿಲ್ಲೆಯಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ-೨೦೨೬ರ ಕಾರ್ಯ ಬಿರುಸಿನಿಂದ ಸಾಗಿದೆ. ಜಿಲ್ಲೆಯ ೬ ವಿಧಾನಸಭಾ ಕ್ಷೇತ್ರಗಳಲ್ಲಿ ಇದುವರೆಗೆ ೧೪ ಲಕ್ಷದ ೩೬ ಸಾವಿರದ ೯೨೦ ಗಣತಿ ನಮೂನೆಗಳನ್ನು ವಿತರಿಸಲಾಗಿದೆ. ಈ ಪೈಕಿ ೫ ಲಕ್ಷದ ೫೭ ಸಾವಿರದ ೫೪೯ ನಮೂನೆಗಳ ಗಣಕೀಕರಣ ಪೂರ್ಣಗೊಂಡಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ. ಜಿಲ್ಲೆಯ ೧ ಸಾವಿರದ ೬೬೧ ಮತಗಟ್ಟೆಗಳ ವ್ಯಾಪ್ತಿಯಲ್ಲಿ ಮತಗಟ್ಟೆ ಮಟ್ಟದ ಅಧಿಕಾರಿಗಳು ಜೂನ್ ೩೦ರಿಂದ ಮನೆ-ಮನೆ ಭೇಟಿ ನಡೆಸುತ್ತಿದ್ದಾರೆ. ಇದು ಜುಲೈ ೨೯ರ ವರೆಗೆ ನಡೆಯಲಿದೆ. ಈ ವೇಳೆ ೨ ಸಾವಿರದ ೫೧೬ ಮರಣ, ೨ ಸಾವಿರದ ೧೧೧ ವಲಸೆ, ೭೨೬ ಡಬಲ್ ಎಂಟ್ರಿ ಮತ್ತು ೫೪ ಗೈರುಹಾಜರಿ ಪ್ರಕರಣಗಳನ್ನು ಪತ್ತೆಹಚ್ಚಲಾಗಿದೆ. ಕೊಪ್ಪಳ ಜಿಲ್ಲೆಯಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಮನೆಮನೆ ಭೇಟಿ ಮುಂದುವರೆದಿದ್ದು, ಜೂನ್ ೩೦ ರಿಂದ ಜುಲೈ ೧೧ ರವರೆಗೆ ಒಟ್ಟು ೧೧ ಲಕ್ಷ ೮೯ ಸಾವಿರದ ೯೧೯ ಗಣತಿ ನಮೂನೆಗಳನ್ನು ಮತದಾರರಿಗೆ ಹಂಚಿಕೆ ಮಾಡಲಾಗಿರುತ್ತದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ತಿಳಿಸಿದ್ದಾರೆ.

<><><><>

ಯಾದಗಿರಿ ಜಿಲ್ಲೆಯಲ್ಲಿ ಮುಂಗಾರು ದುರ್ಬಲವಾಗಿರುವ ಹಿನ್ನೆಲೆಯಲ್ಲಿ ರೈತರು ಬೆಳೆ ರಕ್ಷಣೆಗಾಗಿ ತೇವಾಂಶ ಸಂರಕ್ಷಣಾ ಕ್ರಮಗಳಿಗೆ ಆದ್ಯತೆ ನೀಡಬೇಕೆಂದು ಯಾದಗಿರಿ ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ರತೇಂದ್ರನಾಥ ಸುಗೂರ ಸಲಹೆ ನೀಡಿದ್ದಾರೆ. ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಬಿತ್ತನೆಗೂ ಮುನ್ನ ಬೀಜೋಪಚಾರಕ್ಕೆ ಹೆಚ್ಚಿನ ಮಹತ್ವ ನೀಡಬೇಕು. ನೀರಿನ ಕೊರತೆ ಇರುವ ಪ್ರದೇಶಗಳಲ್ಲಿ ನವಣೆ, ಜೋಳ ಹಾಗೂ ಸಜ್ಜೆಯಂತಹ ಕಡಿಮೆ ನೀರು ಬಳಸುವ ಬೆಳೆಗಳನ್ನು ಬೆಳೆಯುವುದು ಸೂಕ್ತ ಎಂದಿದ್ದಾರೆ. ದ್ವಿದಳ ಧಾನ್ಯಗಳಿಗೆ ರೈಜೋಬಿಯಂ ಹಾಗೂ ಏಕದಳ ಧಾನ್ಯಗಳಿಗೆ ಅಜೋಸ್ಪೈರಿಲಮ್ ಜೈವಿಕ ಗೊಬ್ಬರಗಳಿಂದ ಬೀಜೋಪಚಾರ ಮಾಡಬೇಕು. ಜೊತೆಗೆ

ಟ್ರೈಕೊಡರ್ಮಾ ಶಿಲೀಂಧ್ರನಾಶಕ ಬಳಸಿ ಬೀಜ ಸಂಸ್ಕರಣೆ ನಡೆಸುವುದರಿಂದ ಆರಂಭಿಕ ಹಂತದಲ್ಲಿಯೇ ರೋಗಬಾಧೆಯನ್ನು ತಡೆಯಬಹುದು ಎಂದು ಸಲಹೆ ನೀಡಿದ್ದಾರೆ.

<><><><>

ಅಗಲಿದ ಖ್ಯಾತ ಹಿನ್ನೆಲೆ ಗಾಯಕಿ ಎಸ್. ಜಾನಕಿ ಅವರಿಗೆ ಕರ್ನಾಟಕ ಕಾವಲು ಪಡೆ, ಜಯ ಕರ್ನಾಟಕ ರಕ್ಷಣಾ ವೇದಿಕೆ ಹಾಗೂ ಯುವ ಕರ್ನಾಟಕ ವೇದಿಕೆ  ವತಿಯಿಂದ ಚಾಮರಾಜನಗರದಲ್ಲಿ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಚಾಮರಾಜನಗರದ ಗುಂಡ್ಲುಪೇಟೆ ಮತ್ತು ಕೊಳ್ಳೇಗಾಲ ಪ್ರವಾಸಿ ಮಂದಿರದಲ್ಲಿ ಕಾವಲು ಪಡೆ, ಜಯ ಕರ್ನಾಟಕ ರಕ್ಷಣಾ ವೇದಿಕೆ ಹಾಗೂ ಯುವ ಕರ್ನಾಟಕ ಕಾರ್ಯಕರ್ತರು ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮೌನಾಚರಣೆ ನಡೆಸಿದರು.  ಇದೇ ವೇಳೆ ಕನ್ನಡಪರ ಹೋರಾಟಗಾರ ಆಯಾಜ್ ಮಾತನಾಡಿ, ತಮ್ಮ ಸುಮಧುರ ಕಂಠದಿಂದ ಸಂಗೀತ ಪ್ರಿಯರನ್ನು ಮೋಡಿ ಮಾಡಿದ್ದ ಎಸ್.ಜಾನಕಿ ಗಾಯನ ನಿಲ್ಲಿಸಿದ್ದಾರೆ. ಆಂಧ್ರಪ್ರದೇಶದಲ್ಲಿ ಜನಿಸಿದ್ದರೂ ಎಸ್.ಜಾನಕಿಯವರಿಗೆ ಕರ್ನಾಟಕದ ಮೇಲೆ ವಿಶೇಷ ಪ್ರೀತಿಯಿತ್ತು. ಹೀಗಾಗಿ ಕನ್ನಡದಲ್ಲಿ ೮ ಸಾವಿರಕ್ಕೂ ಅಧಿಕ ಹಾಡುಗಳನ್ನು ಹಾಡಿ ಸಂಗೀತ ಆಸಕ್ತರ ಮನಗೆದ್ದಿದ್ದರು ಎಂದರು.

<><><><>

ವಿದ್ಯುತ್ ಪ್ರಸರಣ ಮಾರ್ಗದ (ಪವರ್ ಗ್ರಿಡ್) ಸಂತ್ರಸ್ತ ರೈತರಿಗೆ ಶೇಕಡ ೩೫ರಷ್ಟು ಹೆಚ್ಚಿನ ಪರಿಹಾರವನ್ನು ವಿತರಿಸುವ ಒಪ್ಪಂದದೊಂದಿಗೆ ಲೋಕ್ ಅದಾಲತ್‌ನಲ್ಲಿ ೪೮ ಪ್ರಕರಣಗಳನ್ನು ರಾಮನಗರ ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶ ಎಂ.ಎಚ್. ಅಣ್ಣಯ್ಯನವರ ಅವರ ಸಮ್ಮುಖದಲ್ಲಿ ಇತ್ಯರ್ಥ ಪಡಿಸಲಾಗಿದೆ. ಈ ಕುರಿತು ಮಾತನಾಡಿದ ನ್ಯಾಯಮೂರ್ತಿ ಎಂ.ಎಚ್. ಅಣ್ಣಯ್ಯನವರ, ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಈ ಬಾರಿ ಹಿರಿಯ ನಾಗರೀಕ ಕಕ್ಷಿದಾರರ ಪ್ರಕರಣಗಳು, ಪವರ್ ಗ್ರಿಡ್ ಮಾರ್ಗದಲ್ಲಿ ಹೆಚ್ಚಿನ ಪರಿಹಾರ ಕೋರಿದ್ದ ರೈತರ ಪ್ರಕರಣಗಳನ್ನು ಆದ್ಯತೆಯ ಮೇರೆಗೆ ಇತ್ಯರ್ಥ ಮಾಡಲಾಗಿದೆ, ರೈತರಿಗೆ ಶೇಕಡ ೩೫ ರಷ್ಟು ಹೆಚ್ಚಿನ ಪರಿಹಾರವನ್ನು ಒದಗಿಸಲಾಗಿದೆ ಎಂದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು<><>